<u>ಅಸಲು ದಾವಾಃ- 48/2016</u> ಡಿ.ಡಬ್ಲ್ಯೂಃ- 1

ದಿನಾಂಕಃ 25.03.2026 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಭೋಧಿಸಲಾಯಿತು.

<u>ಪಾಟೀ ಸವಾಲುಃ- ವಾದಿಯ ಪರ ಶ್ರೀ. ಬಿ ಜಿ ಎಸ್ ವಕೀಲರು</u>

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ನನ್ನ ತಂದೆಯ ಹೆಸರು ರಾಮಪ್ಪ ಎಂದು ತೋರಿಸಿದ್ದೇನೆ ಎಂದರೆ ಸಾಕ್ಷಿಯು ನನ್ನ ಜನಕ ತಂದೆಯಾಗಿದ್ದರಿಂದ ತೋರಿಸಿರುತ್ತೇನೆ ಎಂದು ನುಡಿಯುತ್ತಾರೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರಕ್ಕೆ ಯಾರು ಮಾಹಿತಿ ನೀಡಿರುತ್ತಾರೆ ಎಂದರೆ ನಾನೇ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಪ್ಯಾರಾ 10 ರ ಮಾಹಿತಿಯನ್ನು ನಾನೇ ಹೇಳಿ ಬರೆಸಿದ್ದೇನೆ ಎಂದರೆ ಸರಿ. ನಾನು ನಿಪಿ 12 ರಂತೆ 1 ನೇ ವಾದಿಗೆ ನೋಟೀಸ್ ನೀಡಿರುತ್ತೇನೆ ಎಂದರೆ ಸರಿ. ನಿಪಿ 12 ನೋಟೀಸ್ ನಲ್ಲಿ ನನ್ನ ತಂದೆಯ ಹೆಸರನ್ನು ಪೂಜಾರ್ ರಾಮಪ್ಪ ಎಂದು ಬರೆಸಿದ್ದೇನೆ ಎಂದರೆ ಸರಿ ಮುಂದುವರೆದು ಸಾಕ್ಷಿಯು ಅವರು ನನ್ನ ಜನಕ ತಂದೆ ಎಂದು ನುಡಿಯುತ್ತಾರೆ. ಅರಕೆರೆ ಗ್ರಾಮದ ಸರ್ವೆ ನಂ.14/4, ತರಗನಹಳ್ಳಿ ಗ್ರಾಮದ ಸರ್ವೆ ನಂ.28/4, ನರಸಗೊಂಡನಹಳ್ಳಿ ಗ್ರಾಮದ ಸರ್ವೆ ನಂ.1/4, ಸರ್ವೆ ನಂ.5/4, ಸರ್ವೆ ನಂ.37/5, ಸರ್ವೆ ನಂ.44/2 ಹಾಗೂ ಸರ್ವೆ ನಂ.11, ಸರ್ವೆ ನಂ.31/1 ಮತ್ತು ಹೊಟ್ಯಾಪುರ ಗ್ರಾಮದ ಸರ್ವೆ ನಂ.15/24 ರ ಜಮೀನುಗಳಿಗೆ ಸಂಬಂಧಿಸಿದಂತೆ ನಿಪಿ 12 ನೋಟೀಸನ್ನು ನೀಡಿರುತ್ತೇನೆ ಎಂದರೆ ಸರಿ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು, ಪಾಟೀ ಸವಾಲನ್ನು ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಹೊನ್ನಾಳಿ